**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

C.C. No.3134/2024

CW-14 PW:7

| | |
|---|---|
| ಸಾಕ್ಷಿಯ ಹೆಸರು | ಃ ಮಂಜುಳಾ ಬಡಿಗೇರ |
| ತಂದೆ /ಗಂಡನ ಹೆಸರು | ಃ ನಿಜಗುಣೆಪ್ಪ |
| ವಯಸ್ಸು | ಃ 50 ವರ್ಷ |
| ಉದ್ಯೋಗ | ಃ ಮುಖ್ಯ ಪೊಲೀಸ್ ಪೇದೆ, ನಗರ ಪೊಲೀಸ್ ಠಾಣೆ ಧಾರವಾಡ |

ದಿಃ 10.06.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಎ.ಪಿ.ಪಿ. ಯವರಿಂದ ಃ**

2022 ರಿಂದ 2025 ರವರೆಗೆ ನಾನು ಹುಬ್ಬಳ್ಳಿ ಉಪನಗರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ15/03/2023 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಮದ್ಯಾಹ್ನ 2.30 ಗಂಟೆಗೆ ಚಾಸಾ.1 ಠಾಣೆಗೆ ಹಾಜರಾಗಿ ನೀಡಿದ ಫಿರ್ಯಾದಿಯನ್ನು ಸ್ವೀಕರಿಸಿ ಪ್ರ ವ ವರದಿ ದಾಖಲಿಸಿಕೊಂಡಿರುತ್ತೇನೆ. ಸದರಿ ಫಿರ್ಯಾದಿಯನ್ನು ಈಗಾಗಲೇ ನಿಪಿ.1 ಎಂದು ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಪ್ರ ವ ವರದಿ ಯನ್ನು ನಿಪಿ.10 ಎಂದು ಗುರುತಿಸಲಾಯಿತು. ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.10(ಎ) ಎಂದು ಗುರುತಿಸಲಾಯಿತು. ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ಪ್ರಕರಣವನ್ನು ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ.15 ಇವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆಬಿ ಎಸ್ ವಕೀಲರಿಂದಃ**

ಆಪಾದಿತ ಘಟನೆ ದಿಃ 02/03/2023 ರಂದು ಆಗಿದೆ ಎಂದು ಹೇಳಲಾದರೂ ಸಹ ಹಾಗೂ

ಪಿರ್ಯಾದಯಲ್ಲಿ ಕಾಲ ವಿಳಂಬಕ್ಕೆ ಯಾವುದೇ ಸಕಾರಣಗಳನ್ನು ತೋರಿಸದೇ ಇದ್ದರೂ ಸಹ ನಾನು ದಿಃ 15/03/2023 ರಂದು ಸುಳ್ಳು ಪಿರ್ಯಾದಿ ದಾಖಲಿಸಿಕೊಂಡಿರುತ್ತೇನೇಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಪಿರ್ಯಾದುದಾರರು ಚುನಾವಣಾ ಕರ್ತವ್ಯಕ್ಕೆ ಹೋದ ಕಾರಣ ಪಿರ್ಯಾದಿ ಸಲ್ಲಿಸಲು ವಿಳಂಬವಾಗಿದೆ ಎಂದು ನುಡಿಯುತ್ತಾರೆ. ಪಿರ್ಯಾದಿಯಲ್ಲಿ ಅಂತಹ ಯಾವುದೇ ಕಾರಣವನ್ನು ತೋರಿಸಿಲ್ಲ ಎಂದು ನನ್ನ ಗಮನಕ್ಕೆ ಬಂದರೂ ಸಹ ಪಿರ್ಯಾದಿಗೆ ಸಹಾಯವಾಗಲಿ ಎಂದು ಸುಳ್ಳು ಪಿರ್ಯಾದಿ ಸ್ವೀಕರಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

**ಪಾಟಿಸವಾಲುಃ ಇಲ್ಲ ಎಂದು ತಿಳಿಸಿರುತ್ತಾರೆ.**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**(ಶ್ರೀಮತಿ ದೀಪಾ ಜಿ ಮನೇರಕರ)**

2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.